## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀಮತಿ.ಎಸ್.ವಿ.ಸೌಮ್ಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೋಮೇಶ್ವರಪುರ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

ಓದಲಾಗಿದೆ:

ಸ್ವೀಕೃತಿಸಂಖ್ಯೆ:ಅ.ಸ.ಪ.ಸಂ/ಕಂಪ್ಲೇಂಟ್/ಉಪಲೋಕ್/ಎಮ್‌ವೈಎಸ್–9034/2017/ಡಿಆರ್ಇ–4 ದಿನಾಂಕ:24.09.2018

ಪ್ರಸ್ತಾವನೆ:

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 07.09.2018 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

ಶ್ರೀ.ಎಂ.ಸ್ವಾಮಿ ಬಿನ್ ಲೇಟ್. ಮಾರಪ್ಪ, ಕೊಚ್ಚನಹಳ್ಳಿ ಗ್ರಾಮ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪುತ್ತಾರೆ) ತಮ್ಮ ದೂರಿನಲ್ಲಿ ಶ್ರೀಮತಿ.ಎಸ್.ವಿ.ಸೌಮ್ಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೋಮೇಶ್ವರಪುರ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿರುತ್ತಾರೆ.

**ದೂರಿನ ಸಂಕ್ಷಿಪ್ತ ವಿವರಣೆ:–** ಮೈಸೂರು ತಾಲ್ಲೂಕು ವರುಣಾ ಹೋಬಳಿ ಕೋಚನಹಳ್ಳಿ ಗ್ರಾಮದ ಸ್ವತ್ತಿನ ನಂ.131/3 ಅನ್ನು ತಾವು ಖರೀದಿಸಿದ್ದು, ಸ್ವತ್ತಿನ ಖಾತೆಯನ್ನು ತಮ್ಮ ಹೆಸರಿಗೆ ಮಾಡಿ, ನಮೂನೆ–9 ಮತ್ತು 11ಎ ಅನ್ನು ನೀಡುವಂತೆ ಎದುರುದಾರರನ್ನು ಕೋರಿಕೊಂಡರೂ ಶ್ರೀ.ನಂಜಪ್ಪ ಎಂಬುವವರು ತಕರಾರು ನೀಡಿರುವ ಮೇರೆಗೆ ಎದುರುದಾರರು ಖಾತೆ ಮಾಡಿಕೊಡಲು ನಿರಾಕರಿಸುತ್ತಿದ್ದಾರೆಂದು ಹೇಳಿದ್ದಾರೆ.

ದೂರಿನ ಬಗ್ಗೆ ಮೈಸೂರು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ (ಇನ್ನು ಮುಂದೆ, 'ತನಿಖಾಧಿಕಾರಿಗಳು' ಎಂದು ಕರೆಯಲ್ಪಡುತ್ತಾರೆ) ರವರನ್ನು ಕೇಳಲಾಗಿ, ಸದರಿಯವರು ತಮ್ಮ ವರದಿಯಲ್ಲಿ– ದೂರಿನಲ್ಲಿ ಹೇಳಿದ ಸ್ವತ್ತಿನ ಖಾತೆಯನ್ನು ಅವರ ಹೆಸರಿಗೆ ಮಾಡಿ, ನಮೂನೆ–9 ಮತ್ತು 11ಎ ಅನ್ನು ನೀಡುವಂತೆ ದಿನಾಂಕ:23/07/2016ರಂದು ಸೋಮೇಶ್ವರಪುರ ಗ್ರಾಮ ಪಂಚಾಯತ್‌ಗೆ ಅರ್ಜಿಯನ್ನು ಸಲ್ಲಿಸಿದ ನಂತರ ದಿ:09/12/2016ರಂದು ಶ್ರೀ ನಂಜಪ್ಪ ರವರು ತಕರಾರು ಅರ್ಜಿಯನ್ನು ಸಲ್ಲಿಸಿದ್ದಾರೆ. ದಿನಾಂಕ:26/07/2016ರಂದು ನಡೆದ ಪಂಚಾಯತ್‌ನ ಸಾಮಾನ್ಯ ಸಭೆಯಲ್ಲಿ ಸದರಿ ವಿಷಯವನ್ನು ಚರ್ಚಿಸಿ, ಸ್ವತ್ತಿನ ಖಾತೆ ಮಾಡಲು ತಕರಾರು ಇರುವುದರಿಂದ, ಹಕ್ಕು ಬದಲಾವಣೆಯನ್ನು ವಿಲೇ ಇಡಲು ತೀರ್ಮಾನಿಸುವ ಕುರಿತು ದೂರುದಾರರಿಗೆ ಎದುರುದಾರರು ದಿನಾಂಕ:17/03/2017ರಂದು ಹಿಂಬರಹವನ್ನು ನೀಡಿದ್ದಾರೆ. ಸದರಿ ದೂರಿನ ಬಗ್ಗೆ ವಿಚಾರಣೆ ನಡೆಸಲಾಗಿ ಎದುರುದಾರರು ವಿಚಾರಣೆಗೆ ಹಾಜರಾಗಿ, ದೂರುದಾರರಿಗೆ ನೀಡಲಾಗಿರುವ ನಮೂನೆ–9 ಮತ್ತು 11ಎ ಹಾಗೂ ಕಟ್ಟಡ ಪರವಾನಗಿಯ ಪ್ರತಿಯನ್ನು ಹಾಜರುಪಡಿಸಿರುವುದಾಗಿ ಹೇಳಿದ್ದಾರೆ.

ದೂರುದಾರರು ಮೈಸೂರು ತಾಲ್ಲೂಕು ಪಂಚಾಯತ್, ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಎದುರುದಾರರ ವಿರುದ್ಧ ದೂರನ್ನು ನೀಡಿದ್ದು, ದೂರಿನ ಬಗ್ಗೆ ವರದಿ ಸಲ್ಲಿಸುವಂತೆ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ಮೈಸೂರು ರವರು ಸೂಚಿಸಿದ ನಂತರ ಎದುರುದಾರರು ದೂರುದಾರರಿಗೆ ನಮೂನೆ–9 ಮತ್ತು 11ಎ ಹಾಗೂ ಕಟ್ಟಡ ಪರವಾನಿಗೆ ನೀಡಿರುವುದು ಕಂಡುಬಂದಿದೆ. ಪಂಚಾಯತ್‌ನ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ, ತಕರಾರು ಇರುವುದರಿಂದ, ದೂರುದಾರರ ಹಕ್ಕು ಬದಲಾವಣೆಯನ್ನು ವಿಲೇ ಇಡಲು ತೀರ್ಮಾನಿಸಲಾಗಿದೆಯೆಂದು ಎಂಟು ತಿಂಗಳ ನಂತರ ವಿಳಂಬವಾಗಿ ದಿನಾಂಕ:17/03/2017 ರಂದು ದೂರುದಾರರಿಗೆ ಹಿಂಬರಹ ನೀಡಿ ಎದುರುದಾರರು ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

ಆದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3)ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ ಶ್ರೀಮತಿ.ಎಸ್.ವಿ.ಸೌಮ್ಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೋಮೇಶ್ವರಪುರ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ ರವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ಅಡಿಯಲ್ಲಿ ಇಲಾಖಾ ವಿಚಾರಣೆಯನ್ನು ಉಪಲೋಕಾಯುಕ್ತರಿಗೆ ವಹಿಸಬೇಕೆಂದು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರನ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/469/ಗ್ರಾಪಂಕಾ/2018**
**ಬೆಂಗಳೂರು, ದಿನಾಂಕ:30-10-2018.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ.ಎಸ್.ವಿ.ಸೌಮ್ಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೋಮೇಶ್ವರಪುರ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

30/10

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಹಿಂದಿರುಗಿಸಿದೆ. ಪುಟ ಸಂಖ್ಯೆ: 1 ರಿಂದ 31).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ.
6. ಶ್ರೀಮತಿ.ಎಸ್.ವಿ.ಸೌಮ್ಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೋಮೇಶ್ವರಪುರ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
8. ಗಣಕ ಕೋಶ.